ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯಲ್ಲಿ ಅಪೌಷ್ಠಿಕ ಮತ್ತು ವಿಕಲಚೇತನ ಮಕ್ಕಳಿಗೆ ಪರಿಹಾರ ಒದಗಿಸುವ ಬಗ್ಗೆ

ಶ್ರೀವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

483(568) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿರುವ ಅಪೌಷ್ಠಿಕ ಮಕ್ಕಳ ಸಂಖ್ಯೆಯೆಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಅಪೌಷ್ಠಿಕತೆ ಹೋಗಲಾಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಬೀದರ್ ಜಿಲ್ಲೆಯಲ್ಲಿರುವ ಸಾಂತ್ವನ ಕೇಂದ್ರಗಳ ಸಂಖ್ಯೆ ಎಷ್ಟು; 2016 ರಿಂದ ಇಲ್ಲಿಯವರೆಗೆ ಸಾಂತ್ವನ ಕೇಂದ್ರಕ್ಕೆ ನೀಡಿದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿರುವ ವಿಕಲಚೇತನರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ವಿಕಲಚೇತನ ಪರಿಹಾರ ಪಡೆಯಲು 2018 ರಿಂದ 2020 ರವರೆಗೆ ಎಷ್ಟು ಅರ್ಜಿಗಳು ಬಂದಿವೆ; ಈ ಪೈಕಿ ಇನ್ನೂ ಎಷ್ಟು ಅರ್ಜಿಗಳು ಪರಿಶೀಲನೆಯಲ್ಲಿವೆ ? (ವಿವರ ನೀಡುವುದು)